**Akashvani : Bangalore**
**Regional Bulletin In Kannada**
**01.06.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**01.06.2026 / 14.30 hrs**

**<><*<><>*><>**

## ಮುಖ್ಯಾಂಶಗಳು

**<><*<><>*><>**

**೧. ವಿಧಾನಪರಿಷತ್, ರಾಜ್ಯಸಭಾ ಚುನಾವಣೆಗೆ ವಿಧಾನಸಭೆ ಸಚಿವಾಲಯದಿಂದ ಅಧಿಸೂಚನೆ ಪ್ರಕಟ**

**೨. ’ಕರ್ನಾಟಕ ಕ್ವಾಂಟಮ್ ವಿಶೇಷ ಕಾರ್ಯಪಡೆ ರಚಿಸಿ, ಸರ್ಕಾರ ಅಧಿಕೃತ ಆದೇಶ**

**೩. ನವದೆಹಲಿಗೆ ಪ್ರಯಾಣ ಬೆಳೆಸಿದ ಕಾಂಗ್ರೆಸ್ ನಾಯಕರು; ನೂತನ ಸಚಿವ ಸಂಪುಟ ರಚನೆ ಕುರಿತಂತೆ ಪಕ್ಷದ ವರಿಷ್ಠರೊಂದಿಗೆ ಚರ್ಚೆ**

**೪. ಮುಂದಿನ ದಿನಗಳಲ್ಲಿ ಬೆಂಗಳೂರಿನಿಂದ ಯಾವುದೇ ಕ್ರಿಕೆಟ್ ಪಂದ್ಯ ಸ್ಥಳಾಂತರಿಸಲು ಬಿಡುವುದಿಲ್ಲ- ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸ್ಪಷ್ಟನೆ**

**೫. ಹಿಮಾಚಲ ಪ್ರದೇಶ ರಸ್ತೆ ಅಪಘಾತದಲ್ಲಿ ಬೆಂಗಳೂರಿನ ಏಳು ಮಂದಿ ಸಾವು; ಮೃತದೇಹ ರಾಜ್ಯಕ್ಕೆ ತರಲು ಸಹಕರಿಸುವಂತೆ ಸರ್ಕಾರಕ್ಕೆ ಬಿಜೆಪಿ ಮನವಿ**

**<><*<><>*><>**

ರಾಜ್ಯಸಭೆಯ ನಾಲ್ಕು ಹಾಗೂ ವಿಧಾನಪರಿಷತ್‌ನ ಏಳು ಸ್ಥಾನಗಳಿಗೆ ನಡೆಸುವ ದ್ವೈವಾರ್ಷಿಕ ಚುನಾವಣೆ ಸಂಬಂಧ ವಿಧಾನಸಭೆ ಸಚಿವಾಲಯವು ಇಂದು ಅಧಿಸೂಚನೆ ಪ್ರಕಟಿಸಿದೆ. ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ಹಾಗೂ ವಿಧಾನಪರಿಷತ್‌ಗೆ ಚುನಾಯಿತರಾಗಿರುವ ಸದಸ್ಯರು ಇದೇ ತಿಂಗಳು ನಿವೃತ್ತರಾಗಲಿದ್ದಾರೆ. ಈ ಹಿನ್ನೆಲೆಯಲ್ಲಿ ಚುನಾವಣೆ ನಡೆಯಲಿದ್ದು, ಸಚಿವಾಲಯ ಹೇಳಿಕೆ ಬಿಡುಗಡೆ ಮಾಡಿದೆ. ರಾಜ್ಯಸಭೆ ಹಾಗೂ ಪರಿಷತ್ ಸ್ಥಾನಗಳಿಗೆ ಇದೇ ೧೮ ರಂದು ಮತದಾನ ನಡೆಯಲಿದ್ದು, ಅದೇ ದಿನ ಫಲಿತಾಂಶ ಪ್ರಕಟವಾಗಲಿದೆ. ನಾಮಪತ್ರ ಸಲ್ಲಿಕೆಗೆ ಜೂನ್ ೮ ಕೊನೆಯದಿನವಾಗಿದ್ದು, ಉಮೇದುವಾರಿಕೆ ಹಿಂಪಡೆಯಲು ಜೂನ್ ೧೧ ರವರೆಗೆ ಕಾಲಾವಕಾಶ

ನೀಡಲಾಗಿದೆ. ಕರ್ನಾಟಕ ವಿಧಾನಪರಿಷತ್ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಚುನಾವಣಾ ಅಧಿಕಾರಿಯಾಗಿ ಹಾಗೂ ವಿಧಾನಸಭೆಯ ನಿರ್ದೇಶಕ ಬಿ.ಎಸ್.ಮಹಾಲಿಂಗೇಶ್ ಸಹಾಯಕ ಚುನಾವಣಾ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಲಿದ್ದಾರೆ. ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಬಿಜೆಪಿ ನಾಯಕರಾದ ಈರಣ್ಣ ಕಡಾಡಿ, ಕೆ.ನಾರಾಯಣ ಅವರ ರಾಜ್ಯಸಭೆ ಅವಧಿ ಇದೇ ೨೫ ರಂದು ಕೊನೆಗೊಳ್ಳಲಿದೆ.

<><*<><>*><>

ರಾಜ್ಯವನ್ನು ಕ್ವಾಂಟಮ್ ತಂತ್ರಜ್ಞಾನ ಮತ್ತು ಕ್ವಾಂಟಮ್ ಆವಿಷ್ಕಾರದ ಕೇಂದ್ರವನ್ನಾಗಿಸುವ ಮಹತ್ವಾಕಾಂಕ್ಷೆಯ ಉದ್ದೇಶದಿಂದ ರಾಜ್ಯ ಸರ್ಕಾರ ಕರ್ನಾಟಕ ಕ್ವಾಂಟಮ್ ಟಾಸ್ಕ್ ಫೋರ್ಸ್' ರಚಿಸಿ ಅಧಿಕೃತ ಆದೇಶ ಹೊರಡಿಸಿದೆ.

ಇತ್ತೀಚೆಗೆ ನಡೆದ 'ಕ್ವಾಂಟಮ್ ಇಂಡಿಯಾ ಬೆಂಗಳೂರು ಶೃಂಗಸಭೆ'ಯಲ್ಲಿ ಅನಾವರಣಗೊಳಿಸಲಾಗಿದ್ದ 'ಕರ್ನಾಟಕ ಕ್ವಾಂಟಮ್ ರೋಡ್‌ಮ್ಯಾಪ್'ನಲ್ಲಿನ ರೂಪರೇಷೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು, ಈ ವಿಶೇಷ ಕಾರ್ಯಪಡೆ ಕಾರ್ಯನಿರ್ವಹಿಸಲಿದೆ. ಈ ಕುರಿತು ರಾಜ್ಯ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಅಧಿಕೃತ ಆದೇಶ ಪ್ರಕಟಿಸಿದೆ. ಈ ಪ್ರತಿಷ್ಠಿತ ಟಾಸ್ಕ್ ಫೋರ್ಸ್‌ಗೆ ಐಐಎಸ್‌ಸಿ ಪ್ರಾಧ್ಯಾಪಕ ಪ್ರೊಫೆಸರ್ ಅರಿಂದಮ್ ಘೋಷ್ ನೇತೃತ್ವದಲ್ಲಿ ೧೬ ಸದಸ್ಯರ ಸಮಿತಿ ರಚಿಸಲಾಗಿದೆ. ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನಿರ್ದೇಶಕರು ಹಾಗೂ ಕೆಸ್ಟೆಪ್ಸ್ ವ್ಯವಸ್ಥಾಪಕ ನಿರ್ದೇಶಕರು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ಈ ಟಾಸ್ಕ್ ಫೋರ್ಸ್‌ನಲ್ಲಿ ಪ್ರಮುಖ ಶೈಕ್ಷಣಿಕ ಸಂಸ್ಥೆಗಳು, ಸಂಶೋಧನಾ ಕೇಂದ್ರಗಳು, ಉದ್ಯಮದ ತಜ್ಞರು ಹಾಗೂ ಸರ್ಕಾರದ ಹಿರಿಯ ಅಧಿಕಾರಿಗಳನ್ನು ಒಳಗೊಂಡಂತೆ ಒಟ್ಟು ೧೬ ಮಂದಿ ಸದಸ್ಯರಿದ್ದಾರೆ.

<><*<><>*><>

ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನಿಯೋಜಿತ ಮುಖ್ಯಮಂತ್ರಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಇಂದು ನವದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ನೂತನ ಸಚಿವ ಸಂಪುಟ ರಚನೆ ಕುರಿತಂತೆ ಪಕ್ಷದ ವರಿಷ್ಠರೊಂದಿಗೆ ಇಂದು ಚರ್ಚೆ ನಡೆಸಲಿದ್ದಾರೆ. ಉಭಯ ನಾಯಕರೊಂದಿಗೆ ಮಾಜಿ ಸಚಿವ ಎಚ್.ಸಿ.ಮಹಾದೇವಪ್ಪ, ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ಈಗಾಗಲೇ ಸಿದ್ದರಾಮಯ್ಯ,

ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಸಮಾಲೋಚನೆ ನಡೆಸಿ, ಸಚಿವರ ಮೊದಲ ಪಟ್ಟಿಯನ್ನು ಅಂತಿಮಗೊಳಿಸಿದ್ದಾರೆ. ಮೊದಲ ಪಟ್ಟಿಯಲ್ಲಿ ೧೦ ರಿಂದ ೧೨ ಸಚಿವರ ಹೆಸರುಗಳಿದ್ದು, ಹಿಂದುಳಿದ ವರ್ಗಕ್ಕೆ ೨, ಪರಿಶಿಷ್ಟ ಜಾತಿಯ ಇಬ್ಬರು, ಪರಿಶಿಷ್ಟ ಪಂಗಡದ ಒಬ್ಬರಿಗೆ, ತಲಾ ಇಬ್ಬರು ಒಕ್ಕಲಿಗ ಹಾಗೂ ಲಿಂಗಾಯತ ನಾಯಕರಿಗೆ, ಒಬ್ಬ ಮುಸ್ಲಿಂ ಪ್ರತಿನಿಧಿಗೆ ಅವಕಾಶ ಸಿಗಲಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಇದೇ ೩ ರಂದು ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವ ಸಂಪುಟದ ಸದಸ್ಯರು ಪ್ರಮಾಣವಚನ ಸ್ವೀಕರಿಸಲಿದ್ದಾರೆ.

<><*<><>*><>

ಮುಂಬರುವ ದಿನಗಳಲ್ಲಿ ರಾಜ್ಯದಿಂದ ಯಾವುದೇ ಪ್ರಮುಖ ಪಂದ್ಯಗಳನ್ನು ಬೆಂಗಳೂರಿನಿಂದ ಸ್ಥಳಾಂತರಿಸುವುದಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫೈನಲ್ ಪಂದ್ಯ ಬೆಂಗಳೂರಿನಲ್ಲಿ ನಡೆಯಬೇಕಿತ್ತು. ಅದಕ್ಕೆ ಅನುಮತಿಯನ್ನು ನೀಡಲಾಗಿತ್ತು. ಆದರೆ, ಗುಜರಾತ್ ರಾಜಕೀಯ ಪ್ರಭಾವದಿಂದಾಗಿ ಐಪಿಲ್ ಫೈನಲ್ ಪಂದ್ಯ ಅಹಮದಾಬಾದ್‌ಗೆ ಸ್ಥಳಾಂತರಗೊಂಡಿದೆ ಎಂದು ಆರೋಪಿಸಿದ್ದಾರೆ. ಮುಂದೆ ರಾಜ್ಯಕ್ಕೆ ಹಾಗೂ ಕ್ರೀಡಾಂಗಣಕ್ಕೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

<><*<><>*><>

ಹಿಮಾಚಲ ಪ್ರದೇಶದ ಚಂಬಾ ಜಿಲ್ಲೆಯ ಸಚ್ ಪಾಸ್ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಬೆಂಗಳೂರಿನ ಏಳು ಮಂದಿ ಸಾವನ್ನಪ್ಪಿದ್ದಾರೆ. ಘಟನೆ ಕುರಿತಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಜೆಯ ಹಿನ್ನೆಲೆಯಲ್ಲಿ ತೆರಳಿದ್ದ ಕುಟುಂಬಗಳು ಈ ರೀತಿ ದುರಂತ ಅಂತ್ಯ ಕಂಡಿರುವುದು ಹೃದಯ ವಿದ್ರಾವಕ ಎಂದು ಹೇಳಿದ್ದಾರೆ. ಸಂತ್ರಸ್ತರ ಮೃತ ದೇಹಗಳನ್ನು ಬೆಂಗಳೂರಿಗೆ ಕರೆ ತರಲು ರಾಜ್ಯ ಸರ್ಕಾರ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

<><*<><>*><>

ರಾಜ್ಯದೆಲ್ಲೆಡೆ ಇಂದಿನಿಂದ ಶಾಲೆಗಳು ಆರಂಭವಾಗಿದ್ದು, ಮಕ್ಕಳನ್ನು ಶಿಕ್ಷಕರು ಸಂಭ್ರಮದಿಂದ ಬರಮಾಡಿಕೊಂಡರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಡಿ.ಕೆ.ಶಿವಕುಮಾರ್ ಮಾತನಾಡಿ,

ನೂತನ ಶೈಕ್ಷಣಿಕ ವರ್ಷಕ್ಕೆ ಕಾಲಿಡುತ್ತಿರುವ ವಿದ್ಯಾರ್ಥಿಗಳಿಗೆ ಶುಭ ಕೋರಿದ್ದಾರೆ. ಆತ್ಮವಿಶ್ವಾಸ ಕಳೆದುಕೊಳ್ಳದಂತೆ ಮಕ್ಕಳಿಗೆ ಕಿವಿ ಮಾತು ಹೇಳಿದ್ದಾರೆ. ಹಾಸನದ ದಾಸರಕೊಪ್ಪಲು ಸರ್ಕಾರಿ ಪ್ರೌಢ ಶಾಲೆಯಲ್ಲಿ ಇಂದು ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ೨೦೨೮-೨೭ ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ನಡೆಯಿತು. ಬೇಸಿಗೆ ರಜೆ ಕಳೆದು ಮತ್ತೆ ತರಗತಿಗಳಿಗೆ ಹಾಜರಾದ ವಿದ್ಯಾರ್ಥಿಗಳಿಗೆ ಶಾಸಕ ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಸೇರಿದಂತೆ ಹಲವು ಗಣ್ಯರು ಮಕ್ಕಳಿಗೆ ಸಿಹಿ ವಿತರಿಸಿ ಗುಲಾಬಿ ಹೂ ನೀಡುವ ಮೂಲಕ ಪ್ರೀತಿಯಿಂದ ಸ್ವಾಗತಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೨೦೨೮-೨೭ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲೆಗಳು ಆರಂಭವಾಗಿದ್ದು, ಕೆಲವು ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಹೂ ಮತ್ತು ಸಿಹಿ ತಿಂಡಿ ನೀಡಿ, ಸ್ವಾಗತಿಸಲಾಯಿತು. ದೊಡ್ಡಬಳ್ಳಾಪುರದ ಪಾಲನಹೋಗಿಹಳ್ಳಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ನಡೆದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮಲ್ಲಪ್ಪ.ಕೆ.ಯರಗೋಳ ಮಾತನಾಡಿ, ಉತ್ತಮ ಕಲಿಕೆ ಮತ್ತು ಉಜ್ವಲ ಭವಿಷ್ಯದ ಧ್ಯೇಯದೊಂದಿಗೆ ಶಾಲೆಗಳು ಆರಂಭವಾಗುತ್ತಿವೆ ಎಂದು ತಿಳಿಸಿದ್ದಾರೆ. ಚಾಮರಾಜನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ವಿದ್ಯಾರ್ಥಿಗಳನ್ನು ಟಾಂಗಾ ಮೂಲಕ ಕರೆತರಲಾಯಿತು. ಜಿಲ್ಲಾಧಿಕಾರಿ ಶ್ರೀರೂಪಾ, ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಮೋನಾ ರೋತ್ ಹೂಮಳೆ ಮೂಲಕ ವಿದ್ಯಾರ್ಥಿಗಳನ್ನು ಬರಮಾಡಿಕೊಂಡರು. ಚಾಮರಾಜನಗರ ಗುಂಡ್ಲುಪೇಟೆ ತಾಲೂಕಿನ ಕುಂದಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ತಳಿರು-ತೋರಣಗಳಿಂದ ಸಿಂಗರಿಸಲಾಗಿತ್ತು. ಮಂಗಳವಾದ್ಯಗಳ ಜೊತೆ ಎತ್ತಿನ ಬಂಡಿಗಳಲ್ಲಿ ವಿದ್ಯಾರ್ಥಿಗಳನ್ನು ಮೆರವಣಿಗೆ ಮೂಲಕ ಶಾಲೆಗೆ ಕರೆತರಲಾಯಿತು.

<><*<><>*><>

ಬಹುಕೋಟಿ ಬಿಟ್ ಕಾಯಿನ್ ಹಗರಣ ಮತ್ತು ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ಎನ್.ಎ.ಹ್ಯಾರಿಸ್ ಪುತ್ರ ಯುವ ಕಾಂಗ್ರೆಸ್ ನಾಯಕ ಮೊಹಮ್ಮದ್ ನಲಪಾಡ್‌ಗೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಂದು ಎರಡನೇ ಸಮನ್ಸ್ ಜಾರಿ ಮಾಡಿದ್ದಾರೆ. ರಾಜಕೀಯ ಬದ್ಧತೆಗಳನ್ನು ಉಲ್ಲೇಖಿಸಿ, ಮೊದಲ ಸುತ್ತಿನ ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ, ಇಂದು ವಿಚಾರಣೆಗೆ ಹಾಜರಾಗುವಂತೆ ಇಡಿ ಅಧಿಕಾರಿಗಳು ಸೂಚಿಸಿದ್ದಾರೆ. ಈಗಾಗಲೇ ಶ್ರೀಕಿಯನ್ನು ವಶಕ್ಕೆ ಪಡೆದು ಇಡಿ, ವಿಚಾರಣೆಗೆ ಒಳಪಡಿಸಿದ್ದು, ಈ ಸಮಯದಲ್ಲಿ ತನಿಖಾಧಿಕಾರಿಗಳು ನಲಪಾಡ್ ಮತ್ತು ಶ್ರೀಕಿ ಜೊತೆಗಿನ ವ್ಯವಹಾರದ ಬಗ್ಗೆ ಮಾಹಿತಿ ಸಂಗ್ರಹಿಸಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><*<><>*><>

ಹೋಟೇಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಇತರೆಡೆ ಬಳಸುವ ೧೯ ಕೆ.ಜಿ. ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ದೇಶದ ವಿವಿಧ ನಗರಗಳಲ್ಲಿ ೪೧ ರೂಪಾಯಿಗಳಿಂದ ೫೩ ರೂಪಾಯಿ ೫೦ ಪೈಸೆಗಳಿಗೆ ಏರಿಕೆ ಮಾಡಲಾಗಿದೆ. ಆದರೆ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ.

<><*<><>*><>

ನಿನ್ನೆ ನಡೆದ ಐಪಿಎಲ್ ೨೦೨೬ರ ಫೈನಲ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ವಿರುದ್ಧ ಗೆಲುವು ಸಾಧಿಸಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸತತ ಎರಡನೇ ಬಾರಿಗೆ ಟ್ರೋಫಿ ತನ್ನದಾಗಿಸಿಕೊಂಡಿದೆ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  ><><<>**